ನಿ-72-37

## ಶ್ರೀ ಬಿ.ಕೆ.ಹರಿಪ್ರಸಾದ್ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

### ಸೂಚನೆ:-

1973-74ನೇ ಸಾಲಿನಲ್ಲಿ ಆಗಿನ ಪೌರಾಡಳಿತ ಸಚಿವರಾಗಿದ್ದ ದಿವಂಗತ ಸನ್ಮಾನ್ಯ ಶ್ರೀ.ಬಸವಲಿಂಗಪ್ಪನವರು ರಾಜ್ಯದಲ್ಲಿ ಮೊಟ್ಟಮೊದಲಿಗೆ ದೇಶಕ್ಕೆ ಮಾದರಿಯಾದಂತಹ ಒಂದು ಕ್ರಾಂತಿಕಾರಕ ಕಾನೂನನ್ನು ಜಾರಿಗೆ ತಂದು, ತಲೆಯ ಮೇಲೆ ಮಲ ಹೊರುವುದನ್ನು ಸಂಪೂರ್ಣವಾಗಿ ನಿಷೇಧ ಮಾಡಿದ್ದರು. ಮುಂದುವರೆದಂತೆ 2013 ನೇ ಸಾಲಿನಲ್ಲಿ 'The Prohibition of Employment as Manual Scavengers and their Rehabilitation Act, 2013'ರಂದು ಈ ಮಲಹೊರುವ ಪದ್ಧತಿಯನ್ನು ಸಂಪೂರ್ಣವಾಗಿ ನಿಷೇಧಿಸಿದ್ದರೂ. ಅದನ್ನು ಸರ್ಕಾರವು ಸಂಪೂರ್ಣವಾಗಿ ಜಾರಿಗೊಳಿಸದೆ ಈಗಲೂ ಸಹಾ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಹಸ್ತಚಾಲಿತ ಸ್ಕ್ಯಾವೆಂಜಿಂಗ್ ಪದ್ಧತಿಯು ಚಾಲ್ತಿಯಲ್ಲಿರುವುದು ಅತ್ಯಂತ ಶೋಚನೀಯ ಮತ್ತು ಖಂಡನೀಯ ಸಂಗತಿಯಾಗಿರುವ ಈ ವಿಚಾರವು ಸಾರ್ವಜನಿಕವಾಗಿ ಅತ್ಯಂತ ಮಹತ್ವವಾಗಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಉತ್ತರ:-

ಭಾರತ ಸರ್ಕಾರವು 2013ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ ಅಧಿನಿಯಮ 2013ರ ಕಾಯ್ದೆ ಹಾಗೂ ನಿಯಮಗಳನ್ನು ರೂಪಿಸಿ ಜಾರಿಗೆ ತರಲಾಗಿದೆ. ಅದರಂತೆ ರಾಜ್ಯ ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಎಂ.ಎಸ್ ಕಾಯ್ದೆ 2013ನ್ನು ರಾಜ್ಯದಲ್ಲಿ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್‌ನಲ್ಲಿ ತೊಡಗಿರುವವರನ್ನು ಕಾಯ್ದೆಯ ನಿಯಮಗಳಾನುಸಾರ 5080 ಜನರನ್ನು ಗುರುತಿಸಲಾಗಿರುತ್ತದೆ. ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಪುನರ್ವಸತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಗಿರುತ್ತದೆ. ಒಂದು ಬಾರಿ ನಗದು ಸಹಾಯಧನವಾಗಿ ರೂ.40,000 ಗಳನ್ನು ಭಾರತ ಸರ್ಕಾರದಿಂದ ನೀಡಲಾಗುತ್ತಿದೆ. ರಾಜ್ಯ ಸರ್ಕಾರದ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಸಾಲಸಹಾಯಧನ ನೀಡಲಾಗುತ್ತಿದೆ.
- ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಮೃತಪಟ್ಟಿದ್ದಲ್ಲಿ ಸಂಬಂಧಿಸಿದ ಗುತ್ತಿಗೆದಾರರು/ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮ್ಮೆ ದಾಖಲಿಸಲಾಗುತ್ತಿದೆ. ಮೃತಪಟ್ಟ ಕುಟುಂಬದ ಅವಲಂಬಿತರಿಗೆ ರೂ.10,00,000/- ಪರಿಹಾರಧನವನ್ನು ನೀಡಲಾಗುತ್ತಿದೆ. 1993 ರಿಂದ ಈವರೆಗೂ 88 ಕುಟುಂಬಗಳಿಗೆ ಪರಿಹಾರಧನ ನೀಡಲಾಗಿದೆ.
- ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ನಿರ್ಮೂಲನೆ ಮಾಡಲು ರಾಜ್ಯ ಸರ್ಕಾರವು "State Action Plan for Elimination of Manual Cleaning of Sewers and Septic tanks"ಎಂಬ ಕ್ರಿಯಾಯೋಜನೆ ರೂಪಿಸಿ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಲಾಗಿದೆ.
- ಮ್ಯಾನ್‌ಹೋಲ್ ಸೆಪ್ಟಿಕ್ ಟ್ಯಾಂಕ್ ಹಾಗೂ ತೆರೆದ ಚರಂಡಿ ಗಟಾರಗಳನ್ನು ಸ್ವಚ್ಛಗೊಳಿಸಲು ಆಧುನಿಕ ತಂತ್ರಜ್ಞಾನದ ಯಂತ್ರೋಪಕರಣಗಳನ್ನು ಉಪಯೋಗಿಸಲಾಗುತ್ತಿದೆ. ಈವರೆಗೂ

ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಈ ಕೆಳಗಿನ ಆಧುನಿಕ ತಂತ್ರಜ್ಞಾನದ ಯಂತ್ರೋಪಕರಣಗಳನ್ನು ಖರೀದಿಸಿ ಉಪಯೋಗಿಸಲಾಗುತ್ತಿದೆ.

1. ಸಕ್ಕಿಂಗ್ ಮಷಿನ್ -177,
2. ಜಟ್ಟಿಂಗ್ ಮಷಿನ್ -255,
3. ಡೀಸಾಲ್ಟಿಂಗ್-50,
4. ರಾಡರಿಂಗ್ ಯಂತ್ರ-28
5. ಸಕ್ಕಿಂಗ್ ಕಮ್ ಜಟ್ಟಿಂಗ್ ಮಷಿನ್-132
6. ಇತರೆ ಸ್ವಚ್ಛಗೊಳಸುವ 13 ಯಂತ್ರಗಳನ್ನು

➢ ರಾಜ್ಯದಲ್ಲಿ ಈ ಹಿಂದೆ ಇದ್ದ ಒಟ್ಟು 30,341 ಅನೈರ್ಮಲ್ಯ ಶೌಚಾಲಯಗಳನ್ನು ತೆರವುಗೊಳಸಿ ನೈರ್ಮಲ್ಯ ಶೌಚಾಲಯಗಳನ್ನಾಗಿ ಪರಿವರ್ತಿಸಲಾಗಿದೆ.

➢ ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಮತ್ತು ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಇವರುಗಳು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಬಗ್ಗೆ ಕಾನೂನಿನ ಕುರಿತು ಅರಿವು ಮೂಡಿಸುವ ಮತ್ತು ಪುನರ್ವಸತಿ ಕಲ್ಪಿಸುವ ದಿಸೆಯಲ್ಲಿ ಕಾರ್ಯನಿರ್ವಹಿಸುತ್ತಿವೆ.

➢ ರಾಜ್ಯ ಮಟ್ಟದಲ್ಲಿ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಸಫಾಯಿ ಕರ್ಮಚಾರಿಗಳ ಸಮುದಾಯದ ಪ್ರತಿನಿಧಿಗಳನ್ನು ಹಾಗು ಅನುಷ್ಠಾನ ಇಲಾಖೆಗಳನ್ನು ಒಳಗೊಂಡಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಪ್ರತಿ 6 ತಿಂಗಳಗೊಮ್ಮೆ ಸಭೆ ಸೇರಿ, ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ನಿರ್ಮೂಲನೆಗೊಳಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

**ಕಡತ ಸಂಖ್ಯೆ: ಸಕಇ 582 ಎಸ್‌ಡಿಸಿ 2021**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳದ ವರ್ಗಗಳ ಕಲ್ಯಾಣ ಸಚಿವರು